# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 878(1051 )
ಸದಸ್ಯರ ಹೆಸರು : ಶ್ರೀ ಬಸನಗೌಡ ಬಾದರ್ಲಿ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 17-03-2025
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಶಾಲಾ ಶಿಕ್ಷಣ ಇಲಾಖೆಯಲ್ಲಿನ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಾಗಿ ಬಡ್ತಿ ನೀಡುವ ಪ್ರಕ್ರಿಯೆ ಯಾವ ಹಂತದಲ್ಲಿದೆ: | ಪ್ರೌಢ ಶಾಲಾ ಸಹ ಶಿಕ್ಷಕರ ಹುದ್ದೆಯಿಂದ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕರ ಹುದ್ದೆಗೆ ಪದೋನ್ನತಿ ನೀಡುವ ಸಂಬಂಧ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆರವರು ದಿನಾಂಕ:02/02/2024 ಮತ್ತು 07/3/2024ರ ಪತ್ರಗಳಲ್ಲಿ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸಬೇಕಿದ್ದಲ್ಲಿ ಅನುಸರಿಸಬೇಕಾದ ಮಾನದಂಡಗಳ ಕುರಿತು ಸರ್ಕಾರದ ಆದೇಶದ ಅವಶ್ಯವಿರುವುದಾಗಿ ಹಾಗೂ ಯಾವುದೇ ಶಾಸನಬದ್ಧ ಆಧಾರವಿಲ್ಲದೇ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸಿದ್ದಲ್ಲಿ ಸದರಿ ಪಟ್ಟಿಯನ್ನು ಪ್ರಶ್ನಿಸಿ ಯಾರಾದರೂ ನ್ಯಾಯಾಲಯದಲ್ಲಿ ದಾವೆ ಹೂಡಿದ್ದಲ್ಲಿ ಪಟ್ಟಿ ತಯಾರಿಸುವಲ್ಲಿ ಇಲಾಖೆಯ ಕ್ರಮವನ್ನು ಊರ್ಜಿತಗೊಳಿಸುವ ಯಾವುದೇ ದಾಖಲೆಗಳು ಲಭ್ಯವಿಲ್ಲದೇ ಸದರಿ ಪಟ್ಟಿಯನ್ನು ಘನ ನ್ಯಾಯಾಲಯವು ಅನೂರ್ಜಿತಗೊಳಿಸುವ ಸಾಧ್ಯತೆಯಿರುವುದಾಗಿ ತಿಳಿಸಿರುತ್ತಾರೆ. ಅಲ್ಲದೇ ಈಗ ಜೇಷ್ಠತಾ ನಿಯಮಗಳು 1975ರ ಅನುಸಾರ ಸರ್ಕಾರಿ ಪ್ರೌಢಶಾಲಾ ಸಹಶಿಕ್ಷಕರ ವೃಂದದ ವಿಭಾಗವಾರು ಜೇಷ್ಠತಾ ಪಟ್ಟಿಗಳನ್ನು ತಯಾರಿಸಿ ವಿಭಾಗವಾರು ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದಕ್ಕೆ ಬಡ್ತಿ ನೀಡುತ್ತಿರುವ ಪ್ರಕ್ರಿಯೆಯನ್ನು ಪ್ರಶ್ನಿಸುವ ಸಾಧ್ಯತೆ ಇರುವುದಾಗಿ ತಿಳಿಸುತ್ತಾ, ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದರು.<br><br>ಆಯುಕ್ತರು ಶಾಲಾ ಶಿಕ್ಷಣ ಇಲಾಖೆ ಇವರ ಪ್ರಸ್ತಾವನೆಯ ಹಿನ್ನೆಲೆಯಲ್ಲಿ, ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸಲು ಅನುಸರಿಸಬೇಕಾದ ಮಾನದಂಡಗಳ ಬಗ್ಗೆ ಸೂಕ್ತ ಆದೇಶ ಹೊರಡಿಸುವಂತೆ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ), ಬೆಂಗಳೂರು ಇವರು ದಿನಾಂಕ:23-04-2024ರಂದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದರು. |

| | | |
|---|---|---|
| | | ಈ ಪ್ರಸ್ತಾವನೆಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ದಿನಾಂಕ:16-10-2024ರಂದು ನೀಡಿರುವ ಅಭಿಪ್ರಾಯದನ್ವಯ ಶಾಲಾ ಶಿಕ್ಷಣ ಇಲಾಖೆಯ ನಾಲ್ಕು ವಿಭಾಗಗಳಲ್ಲಿ ಸ್ನಾತಕೋತ್ತರ ಪದವಿ ಪಡೆದ ಅರ್ಹ ಸಹ ಶಿಕ್ಷಕರ ಜೇಷ್ಠತಾ ಪಟ್ಟಿಯನ್ನು ಪರಿಶೀಲಿಸಿ ಸಾಮಾನ್ಯ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಿ, ಅಂತಿಮ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸಲು ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು 1957ರ ನಿಯಮ 7-ಎ ರ ನಿಯಮದನ್ವಯ ಪರಿಶೀಲಿಸಿ ಅಗತ್ಯಕ್ರಮವಹಿಸಲು ಸರ್ಕಾರದ ಪತ್ರ ಸಂಖ್ಯೆ:ಇಪಿ 164 ಎಸ್‌ಓಹೆಚ್ 2023 ದಿನಾಂಕ:23-10-2024ರಲ್ಲಿ ಆಯುಕ್ತರು, ಮತ್ತು ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ ಮತ್ತು ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ), ಬೆಂಗಳೂರು ಇವರಿಗೆ ಸೂಚಿಸಲಾಗಿತ್ತು.<br><br>ಪ್ರಸ್ತುತ ಪ್ರೌಢಶಾಲಾ ಸಹ ಶಿಕ್ಷಕರುಗಳಿಗೆ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಕುರಿತಂತೆ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಇವರ ಹಂತದಲ್ಲಿ ನಾಲ್ಕು ವಿಭಾಗಗಳ ಪ್ರೌಢ ಶಾಲಾ ಶಿಕ್ಷಕರುಗಳ ಪಟ್ಟಿಯನ್ನು ಪಡೆದು ಕ್ರೋಢೀಕರಿಸಲಾಗುತ್ತಿದ್ದು, ಒಂದೇ ಸಾಮಾನ್ಯ ಅರ್ಹತಾ ಜೇಷ್ಠತಾ ಪಟ್ಟಿಯನ್ನು ತಯಾರಿಸಲು ಕ್ರಮವಹಿಸಲಾಗುತ್ತಿದೆ. ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಪ್ರಕ್ರಿಯೆಯ ಬಗ್ಗೆ ತ್ವರಿತವಾಗಿ ನಿಯಮಾನುಸಾರ ಕ್ರಮವಹಿಸಲಾಗುವುದು. |
| ಆ) | ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಉಪನ್ಯಾಸಕರಾಗಿ ಮುಂಬಡ್ತಿ ನೀಡಲು ಇರುವ ವೃಂದ ಮತ್ತು ನೇಮಕಾತಿ ನಿಯಮಗಳು ಯಾವುವು? | ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 35 ಡಿಜಿಓ 2009 ದಿನಾಂಕ:15-05-2014 ಮತ್ತು ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 185 ಡಿಜಿಡಿ 2017(ಭಾಗ-3), ದಿನಾಂಕ:15/10/2024ರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಉಪನ್ಯಾಸಕರಾಗಿ ಮುಂಬಡ್ತಿ ನೀಡಲು ಈ ಕೆಳಕಂಡಂತೆ ಅವಕಾಶ ಕಲ್ಪಿಸಲಾಗಿದೆ-<br><br>• ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 35 ಡಿಜಿಓ 2009 ದಿನಾಂಕ:15-05-2014ರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ನೇರ ನೇಮಕಾತಿಗೆ ಶೇಕಡ 75 ರಷ್ಟು ಮತ್ತು ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗೆ ಪದೋನ್ನತಿ ನೀಡಲು ಶೇಕಡ 25 ರಷ್ಟು ಅವಕಾಶ |

| | | |
|---|---|---|
| | | ಕಲ್ಪಿಸಲಾಗಿದೆ.<br><br>• ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರಾಗಿ 10 ವರ್ಷಗಳ ಅರ್ಹತಾದಾಯಕ ಸೇವೆಯನ್ನು ಪೂರೈಸಿರಬೇಕು. ಒಂದು ವೇಳೆ 10 ವರ್ಷ ಪೂರೈಸಿರುವವರು ಲಭ್ಯವಿಲ್ಲದಿದ್ದಲ್ಲಿ 7 ವರ್ಷ ಸೇವೆಯನ್ನು ಪೂರೈಸುವವರನ್ನು ಬಡ್ತಿಗೆ ಪರಿಗಣಿಸಲಾಗುವುದು.<br><br>• ಮುಂಬಡ್ತಿ ನೀಡುವ ಹುದ್ದೆಗಳಿಗೆ ಅರ್ಹರಿರುವ ಸಹ ಶಿಕ್ಷಕರುಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಅರ್ಹತಾ ಪರೀಕ್ಷೆಯನ್ನು ನಿಗದಿಪಡಿಸಲಾಗಿದ್ದು, ಅರ್ಹತಾ ಪರೀಕ್ಷೆಯನ್ನು ನಡೆಸುವ ಸಂಸ್ಥೆಯನ್ನು ನಿಗದಿಪಡಿಸಲು ಸರ್ಕಾರಕ್ಕೆ ಅಧಿಕಾರವಿರುತ್ತದೆ.<br><br>• ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 185 ಡಿಜಿಡಿ 2017(ಭಾಗ-3) ದಿನಾಂಕ:15-10-2024ರನ್ವಯ ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಉಪನ್ಯಾಸಕರಾಗಿ ಮುಂಬಡ್ತಿ ಹೊಂದಲು ಸಂಬಂಧಿಸಿದ ವಿಷಯದಲ್ಲಿ ಅಥವಾ ಪದವಿ ಮಟ್ಟದಲ್ಲಿ ಅಧ್ಯಯನ ಮಾಡಿದ ಯಾವುದೇ ಐಚ್ಛಿಕ ವಿಷಯಗಳಲ್ಲಿ ಶೇಕಡ 50ಕ್ಕಿಂತ ಕಡಿಮೆ ಇಲ್ಲದ ಅಂಕಗಳೊಂದಿಗೆ ದ್ವಿತೀಯ ದರ್ಜೆಯಲ್ಲಿ ಉತ್ತೀರ್ಣರಾಗಿರ ಬೇಕು ಮತ್ತು ಬಿ.ಇಡಿ. ಪದವಿಯನ್ನು ಹೊಂದಿರಕ್ಕದ್ದು ಎಂದು ವಿದ್ಯಾರ್ಹತೆಯನ್ನು ನಿಗದಿಪಡಿಸಲಾಗಿದೆ. |

ಸಂಖ್ಯೆ:ಇಪಿ 115 ಡಿಜಿಡಬ್ಲ್ಯೂ 2025

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.